ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜ್‌ರವರ ಕೋರ್ಟ್‌ನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 206.

ಮೃತಪಟ್ಟ ವೆಂಕಟರಮಣಶಟ್ಟರ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಲಕ್ಷ್ಮಿದೇವಮ್ಮನು, ಮೃತಪಟ್ಟ ಸದರೀ ವೆಂಕಟರಮಣಶಟ್ಟರಿಗೆ ಸಹೋದರನ ಹೆಂಡತಿ ಆಗಬೇಕೆಂಬ ಹಕ್ಕುದಾರೀ ಮೇಲೆ ಚಾಮರಾಜ ನಗರದ ಸ್ಥಳದ ಸದರೀ ಲಕ್ಷ್ಮಿದೇವಮ್ಮನು, ಸದರೀ ವಾಸಸ್ಥರಾಗಿ ಮೃತಪಟ್ಟ ವೆಂಕಟರಮಣಶಟ್ಟರ ಜಿಂದಗಿ ಬಗ್ಯಾಗಿ ಬರತಕ್ಕ 800 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಲಕ್ಷ್ಮಿದೇವಮ್ಮನವರ ಅರ್ಜೀಯನ್ನು 1887ನೇ ಇಸವಿ ಜೂ೯ ತಿಂಗಳು ತಾರೀಖು 30ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವೆಂಕಟರಮಣಶಟ್ಟರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿಯಿದೆ.

1887ನೇ ಇಸವಿ ಜೂ೯ ತಿಂಗಳು 3ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

1887ನೇ ಇಸವಿ ಅರ್ಜೀ ನಂಬರ್ 231.

ಮೃತಪಟ್ಟ ಗೌರಮ್ಮನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಬೊಕ್ಕಸ್ತ ಮಾದಪ್ಪನವರು, ಮೃತಪಟ್ಟ ಸದರೀ ಗೌರಮ್ಮನವರಿಗೆ ಭಾವನಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಸ್ಥಳದ ಸದರೀ ಬೊಕ್ಕಸ್ತ ಮಾದಪ್ಪನವರು ನಂಜನಗೂಡು ತಾ|| ಸರ್ವಮಾನ್ಯ ಹೊಸಕೋಟೆ ವಾಸಸ್ಥರಾಗಿ ಮೃತಪಟ್ಟ ಗೌರಮ್ಮನವರ ಜಿಂದಗಿ ಬಗ್ಯಾಗಿ ಬರತಕ್ಕ 500 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಬೊಕ್ಕಸ್ತ ಮಾದಪ್ಪನವರ ಅರ್ಜಿಯನ್ನು 1887ನೇ ಇಸವಿ ಜುಲೈ ತಿಂಗಳು ತಾರೀಖು 12ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಗೌರಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿಉಧೆ.

1887ನೇ ಇಸವಿ ಜೂ೯ ತಿಂಗಳು 9ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಎಸ್. ಹೇಮಾಜಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

ಚಿತ್ರದುರ್ಗ ಡಿಸ್ಟ್ರಿಕ್ಟ್.

ಇಸ್ತಿಹಾರ್‌ನಾಮಾ.

ತಾರೀಖು 26ನೇ ಮೇ 1887.

ಚಿತ್ರದುರ್ಗ ಡಿಸ್ಟ್ರಿಕ್ಟ್ ಮೈಸೂರು ಗವರ್ನಮೆಂಟ್ ಸೇವಿಂಗ್ಸ್‌ಬ್ಯಾಂಕು ಡಿಪಾಜಿಟರುಗಳು, ಸ೯ 1887ನೇ ಮಾರ್ಚೀ ಆಖೈರುವರಿಗಿನ ಬಡ್ಡಿ ದಾಖಲ್ ಬಗ್ಯೆ ತಮ್ಮ ಪ್ಯಾಸು ಬುಕ್ಕುಗಳನ್ನು ಚಿತ್ರದುರ್ಗ ಡಿಸ್ಟ್ರಿಕ್ಟ್ ಖಜಾನೆಗೆ ಹಾಜರ್ಮಾಡಬೇಕೆಂದು ಇದರಿಂದ ಕೇಳಲ್ಪಟ್ಟಿರುತ್ತಾರೆ.

ರಘುನಾಥರಾವ್,
ಟ್ರೆಜರಿ ಆಫೀಸರ್.